# ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ

## ಸಿಸಿ ನಂ. 497/2018

**ಚಾಸಾ-3/ಪಿಡಬ್ಲೂ-1**

| | |
|---|---|
| **ಹೆಸರು** | ಜಗದೀಶ |
| **ತಂದೆ ಹೆಸರು** | ಕಾಮಣ್ಣ |
| **ವಯಸ್ಸು** | 29 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ಇಟಗಾ |

**ದಿನಾಂಕ 10-10-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-2 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 4 ವರ್ಷಗಳ ಹಿಂದೆ ಇಟಗಾ ಗ್ರಾಮದ ಚಿದಾನಂದ ಸ್ವಾಮಿ ಗುಡಿಯ ಹತ್ತಿರ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಪೊಲೀಸರು ಪಡೆದುಕೊಂಡರು ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಏನನ್ನು ವಶ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯುನ್ನ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 01-07-2018 ರಂದು ಮಧ್ಯಾಹ್ನ 01-30 ರ ಸಮಯದಲ್ಲಿ ಇಟಗಾ ಸೀಮಾಂತರದ ಸರಕಾರಿ ಗೈರಾಣ ಜಮೀನು ಸ.ನಂ.1 ರಲ್ಲಿ ಆರೋಪಿಗಳು ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಮರಳಿನ ಮೇಲೆ ಪೊಲೀಸರು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ದಾಳಿ ಮಾಡಿ ಸದರಿ ಮರಳನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಹಾಜರಿದ್ದು ನಿಪಿ-1 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ